ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಕಾರ್ಯಗಳ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

402 (432) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಾಲ್ಯಾಭೀವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆ/ಕಾರ್ಯಕ್ರಮಗಳು ಯಾವುವು ; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳು ಯಾವುವು ; (ವಿವರ ನೀಡುವುದು)

(ಆ) ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆ/ಕಾರ್ಯಕ್ರಮಗಳಿಂದ ಉದ್ಯೋಗ ಸೃಷ್ಟಿಗೆ ಅವಕಾಶಗಳಿದೆಯೇ ; ಅವಕಾಶಗಳಿದ್ದಲ್ಲಿ, ಯಾವ ರೀತಿಯ ಅವಕಾಶಗಳಿವೆ ಎಂಬುದರ ಬಗ್ಗೆ ಮಾಹಿತಿ ನೀಡುವುದು ;

(ಇ) ಈ ಇಲಾಖೆಯಿಂದ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕೈಗೊಂಡಿರುವ ಯೋಜನೆ/ಕಾರ್ಯಕ್ರಮಗಳು ಯಾವುವು ; ಇದಕ್ಕೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನ ಎಷ್ಟು ; (ಯೋಜನೆ/ಕಾರ್ಯಕ್ರಮವಾರು ವಿವರ ನೀಡುವುದು)

(ಈ) ಈ ಯೋಜನೆ/ಕಾರ್ಯಕ್ರಮಗಳನ್ನು ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ವಿವರಗಳನ್ನು ತಾಲ್ಲೂಕುವಾರು ಒದಗಿಸುವುದು ?